ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: https://kptcl.karnataka.gov.in/
ಮಿಂಚಂಚೆ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)

ವಿಷಯ: ನಿಗಮದ ನೌಕರರು/ಅಧಿಕಾರಿಗಳಿಗೆ ಹಬ್ಬದ ಮುಂಗಡದ ಮೊತ್ತವನ್ನು ಪರಿಷ್ಕರಿಸುವ ಬಗ್ಗೆ.

***

ಓದಲಾಗಿದೆ:

1. ನಿಗಮದ ನೌಕರರಿಗೆ ವಿವಿಧ ಮುಂಗಡಗಳನ್ನು ಮಂಜೂರು ಮಾಡಿ ಹೊರಡಿಸಿರುವ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/3594/98-99 ದಿನಾಂಕ: 10.09.2012.
2. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 02.03.2018 ರಂದು ಕವಿಪ್ರನಿನಿ ನೌಕರರ ಸಂಘ(ನೋಂ.ಸಂ-659) ಮತ್ತು ನಿಗಮದ ಆಡಳಿತ ವರ್ಗಗಳ ನಡುವೆ ಆದ ಒಪ್ಪಂದ.
3. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 01.04.2017 ರಿಂದ ಜಾರಿಗೆ ಬರುವಂತೆ ನಿಗಮದ ನೌಕರರಿಗೆ ಮತ್ತು ಅಧಿಕಾರಿಗಳಿಗೆ ಸಂಬಂಧಪಟ್ಟಂತೆ ಹೊರಡಿಸಲಾದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69516/2017-18 ದಿನಾಂಕ: 09.03.2018 ಮತ್ತು ಕವಿಪ್ರನಿನಿ/ಬಿ16/69517/2017-18 ದಿನಾಂಕ: 09.03.2018.
4. ಹಬ್ಬದ ಮುಂಗಡದ ಮೊತ್ತವನ್ನು ಪರಿಷ್ಕರಿಸಿ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಆಇ 8 ಮಕಮು 2021 ದಿನಾಂಕ: 14.12.2021.
5. ನಿಗಮದ ದಿನಾಂಕ: 17.12.2021 ರ ಟಿಪ್ಪಣಿ.

ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/3594/1998-99, ಬೆಂಗಳೂರು, ದಿನಾಂಕ: 17 DEC 2021

ನಿಗಮದ ಅಧಿಕಾರಿ/ನೌಕರರಿಗೆ ಮೂಲ ವೇತನದ ಶೇಕಡ 75 ರಷ್ಟರ ಮೊತ್ತವನ್ನು ₹25,000/-(ರೂಪಾಯಿ ಇಪ್ಪತ್ತೈದು ಸಾವಿರ ಮಾತ್ರ) ಗರಿಷ್ಟ ಮಿತಿಗೊಳಪಟ್ಟು ಒಂದು ಆರ್ಥಿಕ ವರ್ಷದಲ್ಲಿ ಒಂದು ಹಬ್ಬಕ್ಕೆ ಬಡ್ಡಿ ರಹಿತ ಹಬ್ಬದ ಮುಂಗಡವನ್ನು ಮಂಜೂರು ಮಾಡಲು ನಿಗಮವು ಅನುಮೋದಿಸಿದೆ.

ಹಬ್ಬದ ಮುಂಗಡವನ್ನು ಮಂಜೂರು ಮಾಡುವ ಬಗ್ಗೆ ಕವಿಪ್ರನಿನಿ ಅಕೌಂಟ್ಸ್ ಮಾನ್ಯುಯಲ್ ವಾಲ್ಯೂಂ-2 ಭಾಗ-ಬಿ ನಲ್ಲಿನ ಪ್ಯಾರ 494 ಹಾಗೂ 495 ರಲ್ಲಿ ಹಾಲಿ ಚಾಲ್ತಿಯಲ್ಲಿರುವ ಇತರೆ ಷರತ್ತು ಹಾಗೂ ನಿಬಂಧನೆಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಈ ಸೌಲಭ್ಯಕ್ಕಾಗಿ 'ಡಿಯರ್‌ನೆಸ್ ಪೇ' ಅನ್ನು ಮೂಲ ವೇತನದ ಭಾಗವೆಂದು ಪರಿಗಣಿಸತಕ್ಕದ್ದಲ್ಲ.

ಆದೇಶದ ಮೇರೆಗೆ,

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

ಮು.ತಿ.ನೋ.

## ಮೆಮೋ

ಕ್ರಮಾಂಕ:ಸೆಸ್ಕ್/ಆ ಮತ್ತು ಮಾ.ಸಂ./05/02/2021-22/ 16306

ದಿನಾಂಕ: 24 DEC 2021

ನಿಗಮದ ಅಧಿಕಾರಿ/ನೌಕರರಿಗೆ ಮೂಲ ವೇತನದ ಶೇಕಡ 75ರಷ್ಟರ ಮೊತ್ತವನ್ನು ರೂ.25,000/-(ರೂಪಾಯಿ ಇಪ್ಪತ್ತೈದು ಸಾವಿರ ಮಾತ್ರ) ಗರಿಷ್ಟ ಮಿತಿಗೊಳಪಟ್ಟು ಒಂದು ಆರ್ಥಿಕ ವರ್ಷದಲ್ಲಿ ಒಂದು ಹಬ್ಬಕ್ಕೆ ಬಡ್ಡಿ ರಹಿತ ಹಬ್ಬದ ಮುಂಗಡವನ್ನು ಮಂಜೂರು ಕುರಿತು ನಿರ್ದೇಶಕರು(ಆ ಮತ್ತು ಮಾಸಂ), ಕವಿಪ್ರನಿನಿ, ಬೆಂಗಳೂರು ರವರು ಹೊರಡಿಸಿರುವ ಆದೇಶ ಪತ್ರ ಸಂಖ್ಯೆ:ಕವಿಪ್ರನಿನಿ/ಬಿ16/3594/1998-99 ದಿನಾಂಕ:17.12.2021ರ ಆದೇಶವನ್ನು ಚಾವಿಸನಿನಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲು ಆದೇಶಿಸಲಾಗಿದೆ.

(ಸಹಿ)
ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)
ಚಾ.ವಿ.ಸ.ನಿ.ನಿ., ಮೈಸೂರು.

ಪ್ರತಿಗಳು:

- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ, ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ ಹಾಗು ಅಗತ್ಯ ಕ್ರಮಕ್ಕಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ಮುಖ್ಯ ಆರ್ಥಿಕ ಸಲಹೆಗಾರರು ಇವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಪ್ರತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ ಮುಖ್ಯ ಆರ್ಥಿಕ ಸಲಹೆಗಾರರುರವರ ಗಮನಕ್ಕೆ ತರುವಂತೆ ಕೋರಿದೆ.
- ಸ-2(ಆ ಮತ್ತು ಮಾ.ಸಂ)/ಪ್ರ.ಕ.